# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆದರ್ಶ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್ ತಿಕೋಟ, ವಿಜಾಪುರ ಜಿಲ್ಲೆ ಇವರಿಗೆ ಡಿಪ್ಲೊಮೊ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸ್ ಮಂಜೂರಾತಿ ಬಗ್ಗೆ.

ooo

ಓದಲಾಗಿದೆ:-

ಪೀಠಾಧಿಪತಿಗಳು, ಪ್ಯಾರಾ ಮೆಡಿಕಲ್ ಬೋರ್ಡ್ ಹಾಗೂ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಪಿಎಂಬಿ 4:2001-02 ದಿ:. 28-2-2002.

ಪ್ರಸ್ತಾವನೆ:-

ಮೇಲೆ ಓದಲಾದ ದಿ: 28-2-2002ರ ಪತ್ರದಲ್ಲಿ ಪೀಠಾಧಿಪತಿಗಳು, ಪ್ಯಾರಾ ಮೆಡಿಕಲ್ ಬೋರ್ಡ್ ಹಾಗೂ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಆದರ್ಶ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್ ತಿಕೋಟ, ವಿಜಾಪುರ ಜಿಲ್ಲೆ ಇವರಿಗೆ ಡಿಪ್ಲೊಮೋ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸ್ ಅನ್ನು 20 (ಇಪ್ಪತ್ತು) ವಿದ್ಯಾರ್ಥಿಗಳ ಪ್ರವೇಶ ಸಾಮರ್ಥ್ಯದೊಂದಿಗೆ 2002-03ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಅನುಮತಿ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ. ಆದ್ದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 81 ಎಂಪಿಎಂ 2002, ಬೆಂಗಳೂರು, ದಿ: 12-6-2002

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರ ಸರ್ಕಾರವು ಆದರ್ಶ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್ ತಿಕೋಟ, ವಿಜಾಪುರ ಜಿಲ್ಲೆ ಇವರಿಗೆ ಡಿಪ್ಲೊಮೋ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸ್‌ನ್ನು 20 (ಇಪ್ಪತ್ತು) ವಿದ್ಯಾರ್ಥಿಗಳ ಪ್ರವೇಶ ಸಾಮರ್ಥ್ಯದೊಂದಿಗೆ 2002-03ನೇ ಶೈಕ್ಷಣಿಕ ವರ್ಷದಿಂದ ಈ ಕೆಳಕಂಡ ಷರತ್ತುಗಳಿಗನುಸಾರವಾಗಿ ಪ್ರಾರಂಭಿಸಲು ಅನುಮತಿ ನೀಡಿದೆ.

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕ ಕೋರ್ಸಿಗೆ ರೂ.20,000 ( ಇಪ್ಪತ್ತು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಪ್ರತೀ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ 5,000-00 ( ಐದು ಸಾವಿರ ರೂಪಾಯಿಗಳು ಮಾತ್ರ) ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಂದಾಯ ಮಾಡತಕ್ಕದ್ದು.

(2) ಸಂಸ್ಥೆಯವರು ಕೋರ್ಸ್ ಅನ್ನು ಪ್ರಾರಂಭ ಮಾಡುವ ಮೊದಲು ಬೋರ್ಡು ನಿಗದಿಪಡಿಸಿದ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸುಗಳಿಗೆ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ಜನವರಿ: ಫೆಬ್ರವರಿ ಅಥವಾ ಜೂನ್ : ಜುಲೈ ತಿಂಗಳಲ್ಲಿ ಮಾಡಿಕೊಳ್ಳಬಹುದು.

-2

(4) ಸದರಿ ಕೋರ್ಸುಗಳಿಗೆ ಪ್ರವೇಶವನ್ನು ಫೆಬ್ರವರಿ ಅಥವಾ ಜುಲೈ ತಿಂಗಳಲ್ಲಿ ಅಂತ್ಯಗೊಳಿಸಿ ಆಯ್ಕೆಗೊಂಡ ವಿದ್ಯಾರ್ಥಿಗಳ ಪಟ್ಟಿಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಪ್ರತಿ ವರ್ಷ ಮಾರ್ಚ್ ಅಥವಾ ಆಗಸ್ಟ್ ತಿಂಗಳಲ್ಲಿ ಸಲ್ಲಿಸತಕ್ಕದ್ದು.

(5) ಪ್ಯಾರಾ ಮೆಡಿಕಲ್ ಕೋರ್ಸ್‌ಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ರೂ.200-00 ರಂತೆ ನೋಂದಣಿ ಶುಲ್ಕದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸತಕ್ಕದ್ದು.

(6) ಪ್ಯಾರಾ ಮೆಡಿಕಲ್ ಕೋರ್ಸಿಗೆ ಕನಿಷ್ಠ ವಿದ್ಯಾರ್ಹತೆಯು ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

(7) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರ ನಿಗಧಿಪಡಿಸಿದ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(8) ಸಂಸ್ಥೆಯು ಯಾವುದೇ ಸಂದರ್ಭದಲ್ಲಿ ಸರ್ಕಾರ ಮಂಜೂರಾತಿ ನೀಡಿದ ಪ್ರವೇಶಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ.

(9) ಸಂಸ್ಥೆಯವರಿಗೆ ನಿಗಧಿಪಡಿಸಿದ ಸೀಟುಗಳಲ್ಲಿ ಶೇ.20ರಷ್ಟನ್ನು ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶನೀಡಲು ಸಂಸ್ಥೆಯು ಬದ್ಧವಾಗಿರತಕ್ಕದ್ದು.

(10) ಪ್ಯಾರಾ ಮೆಡಿಕಲ್ ಬೋರ್ಡ್ ನಿಗಧಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯ ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಹಾಗೂ ಪರೀಕ್ಷಾ ಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗಧಿಪಡಿಸಿದ ಇತರೆ ನಿಯಮಗಳನ್ನು ಸಂಸ್ಥೆಯು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(11) ಸಂಸ್ಥೆಯು ಕೋರ್ಸನ್ನು ಪ್ರಾರಂಭಿಸುವ ಮುನ್ನ ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(12) ಸದರಿ ಸಂಸ್ಥೆಯು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ವಿದ್ಯಾರ್ಥಿಗಳ ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ಇಚ್ಛಿಸಿದಲ್ಲಿ ಎರಡನೇ ಬಾರಿಗೆ ಸಂಸ್ಥೆಯನ್ನು ತಪಾಸಣೆ ಮಾಡಬಹುದು.

(13) ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಸಂಸ್ಥೆಗೆ ನೀಡಲಾಗುವುದಿಲ್ಲ.

(14) ಸಂಸ್ಥೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ. ಮೆಡಿಕಲ್ ಬೋರ್ಡಿನವರು ನಿಗಧಿಪಡಿಸಿದ ಮಾದರಿಯನ್ನು ಅನುಸರಿಸತಕ್ಕದ್ದು.

(15) ಪ್ಯಾರಾ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಿಂದ ಪಡೆಯತಕ್ಕದ್ದು.

(16) ಪ್ರತಿ ತಪಾಸಣೆಗೆ ಸಂಸ್ಥೆಯು ರೂ.5,000-00 ( ಐದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಪಾವತಿ ಮಾಡತಕ್ಕದ್ದು.

(17) ಸರ್ಕಾರದ ಆದೇಶ ಸಂಖ್ಯೆ: ಆಕುಕ 144 ಎಂಎಂಇ 98 ದಿ: 30-3-99ರ ಆದೇಶದಲ್ಲಿ ಸೂಚಿಸಿರುವ ಮಾರ್ಗಸೂಚಿಗಳನ್ನು ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಶಿವಕುಮಾರಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)

ಗೆ,

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು
3. ಪೀಠಾಧಿಪತಿಗಳು, ಪ್ಯಾರಾ ಮೆಡಿಕಲ್ ಬೋರ್ಡ್, ಆನಂದರಾವ್ ವೃತ್ತ, ಬೆಂಗಳೂರು
4. ಕಾರ್ಯದರ್ಶಿಗಳು, ಅಧ್ಯಕ್ಷರು, ಪ್ಯಾರಾ ಮೆಡಿಕಲ್ ಇನ್ಸ್‌ಟಿಟ್ಯೂಟ್ ತಿಕೋಟ, ವಿಜಾಪುರ
5. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು
6. ಕಾರ್ಯದರ್ಶಿ, ಉಪಕಾರ್ಯದರ್ಶಿ (ವೈ ಶಿ) ರವರ ಆಪ್ತ ಸಹಾಯಕರು
7. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು